ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೨೧

ಪಟ್ಟಿ – ೦೨

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಮಂಗಳವಾರ, ದಿನಾಂಕ : ೨೪ನೇ ಜೂನ್, ೨೦೧೪**

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

## ಹಾರಂಗಿ ನಾಲಾ ಸೇತುವೆಗೆ ತಡೆಗೋಡೆ ನಿರ್ಮಾಣ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೨೫ (೭೫) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅರಕಲಗೂಡು ತಾಲ್ಲೂಕಿನ ಕಾಳೇನಹಳ್ಳಿ ಗ್ರಾಮದ ಬಳಿ ರಾಮನಾಥಪುರ ಮತ್ತು ಮೈಸೂರು ನಡುವೆ ಸಂಪರ್ಕಿಸುವ ರಾಜ್ಯ ಹೆದ್ದಾರಿ ನಡುವೆ ಹಾದು ಹೋಗಿರುವ ಹಾರಂಗಿ ನಾಲಾ ಸೇತುವೆ ತಡೆಗೋಡೆ ನಿರ್ಮಿಸದಿರುವುದರಿಂದ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ನಾಲಾ ಸೇತುವೆಯನ್ನು ವಿಸ್ತರಿಸಲು ಸರ್ಕಾರ ಯೋಜನೆ ರೂಪಿಸಲಾಗಿದೆಯೇ ;

(ಇ) ಸದರಿ ಸೇತುವೆಯನ್ನು ಆಧುನೀಕರಣಗೊಳಿಸಿ ಸಂಚಾರಕ್ಕೆ ಸುಗಮ ಮಾಡಿ ಅಪಘಾತ ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಿರೂರು-ಮಂಗಳೂರು ರಸ್ತೆಯಲ್ಲಿನ ಸೇತುವೆ ಕಾಮಗಾರಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೨೬ (೫೦) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆ, ಯಲಬುರ್ಗಾ ತಾಲ್ಲೂಕಿನಲ್ಲಿ ಶಿರೂರು-ಮಂಗಳೂರು ರಸ್ತೆ ಮಧ್ಯದಲ್ಲಿನ ಸೇತುವೆ ಹಾಗೂ ಬನ್ನಿಕೊಪ್ಪ-ಕವಲೂರು ರಸ್ತೆ ಮಧ್ಯದಲ್ಲಿನ ಸೇತುವೆಗಳ ಕಾಮಗಾರಿಗಳು ಅಪೂರ್ಣವಾಗಿರುವ ವಿಷಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಗಳು ಆಡಳಿತಾತ್ಮಕ ಅನುಮೋದನೆ ಪಡೆದುಕೊಂಡು ಪ್ರಾರಂಭವಾಗಿದ್ದು ಯಾವಾಗ ;

(ಇ) ಗುತ್ತಿಗೆ ಕರಾರಿನನ್ವಯ ಕಾಮಗಾರಿಯನ್ನು ಲೋಕಾರ್ಪಣೆ ಮಾಡಬೇಕಿದ್ದ ದಿನಾಂಕ ಯಾವುದು ;

(ಈ) ಸದರಿ ಕಾಮಗಾರಿಗಳಿಗೆ ಸರ್ಕಾರ ಇದುವರೆಗೂ ನೀಡಿರುವ ಅನುದಾನದ ಪ್ರಮಾಣ ಎಷ್ಟು ;

(ಉ) ಈ ಕಾಮಗಾರಿಗಳನ್ನು ಯಾವ ಏಜೆನ್ಸಿಗಳು ನಿರ್ವಹಿಸುತ್ತಿವೆ ;

(ಊ) ಈ ಎರಡೂ ಕಾಮಗಾರಿಗಳನ್ನು ಇಲಾಖೆಯವರು ತಮ್ಮ ವಶಕ್ಕೆ ತೆಗೆದುಕೊಂಡಿದ್ದಾರೆಯೇ ?

## ನಿರಂತರ ಜ್ಯೋತಿ ಕಾಮಗಾರಿ ಪ್ರಗತಿ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೭ (೫೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ಜಿಲ್ಲೆಯಲ್ಲಿ ನಿರಂತರ ಜ್ಯೋತಿ ಯೋಜನೆಯ ಪ್ರಗತಿ ವಿವರ ನೀಡುವುದು ;

(ಆ) ಈ ಯೋಜನೆಗಾಗಿ ಬಿಡುಗಡೆಯಾದ ಒಟ್ಟು ಅನುದಾನ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ;

(ಇ) ಸದರಿ ಯೋಜನೆಯಲ್ಲಿ ಕಳಪೆ ಗುಣಮಟ್ಟದ ಇನ್ಸುಲೇಟರ್ಸ್ ಹಾಗೂ ಉಪಕರಣಗಳನ್ನು ಜೋಡಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದಾಗಿ ಯೋಜನೆ ಸಂಪೂರ್ಣ ವಿಫಲವಾಗಿರುವ ವಿಷಯ ಸರ್ಕಾರಕ್ಕೆ ತಿಳಿದಿದೆಯೇ ;

(ಈ) ಬಂದಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ;

(ಉ) ಜಿಲ್ಲೆಯಲ್ಲಿ ಹೆಚ್ಚಿನ ಲೋಡ್ ಇರುವಂತಹ ಟ್ರಾನ್ಸ್‌ಫಾರ್ಮರ್‌ಗಳ ಪಟ್ಟಿಯನ್ನು ತಾಲ್ಲೂಕುವಾರು ನೀಡುವುದು ;

(ಊ) ಹೆಚ್ಚಿನ ಲೋಡ್ ಇರುವಂತಹ ಕಡೆ ಹೆಚ್ಚುವರಿ ಟ್ರಾನ್ಸ್‌ಫಾರ್ಮರ್‌ಗಳ ಪೂರೈಕೆ ಕುರಿತು ಬೇಡಿಕೆಯೇನಾದರೂ ಬೆಸ್ಕಾಂನಿಂದ ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ;

(ಋ) ಸಲ್ಲಿಸಿದ್ದಲ್ಲಿ ಸರ್ಕಾರ ಇದಕ್ಕಾಗಿ ಬಿಡುಗಡೆಗೊಳಿಸಿದ ಮೊತ್ತ ಎಷ್ಟು ;

(ೠ) ಜಿಲ್ಲೆಯಲ್ಲಿ ವಿದ್ಯುತ್ ಅಭಾವವೇನಾದರೂ ಇದೆಯೇ ; ಇದ್ದಲ್ಲಿ, ನಿವಾರಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಷ್ಟ್ರೀಯ ಹೆದ್ದಾರಿ ೫೦ರಲ್ಲಿ ವಾಹನಗಳ ಓಡಾಟದ ಪ್ರಮಾಣ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೮ (೫೨) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿಯು ಸಣ್ಣ ಹಳ್ಳಿಗಳಲ್ಲಿಯೂ ಸಹ ಮೇಲ್ಸೇತುವೆಯನ್ನಾಗಿ ಪರಿವರ್ತಿಸಿ ಕುಷ್ಟಗಿ ಪಟ್ಟಣದ ಹತ್ತಿರ ಮಾತ್ರ ಮೇಲ್ಸೇತುವೆ ನಿರ್ಮಿಸದೇ ಇರುವುದಕ್ಕೆ ಕಾರಣಗಳೇನು ;

(ಆ) ಇದರಿಂದಾಗಿ ಈ ಭಾಗದಲ್ಲಿ ಸಾರ್ವಜನಿಕರಿಗೆ, ಪಾದಚಾರಿಗಳಿಗೆ ತೊಂದರೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಯು.ಜಿ.ಡಿ. ಕಾಮಗಾರಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೯ (೫೩) ಮಾನ್ಯ ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಪ್ಪಳ ನಗರದಲ್ಲಿ ಸದ್ಯ ಕೈಗೊಳ್ಳುತ್ತಿರುವ ಯು.ಜಿ.ಡಿ. ಕಾಮಗಾರಿಯನ್ನು ಯಾವ ಕಂಪನಿಗೆ ಗುತ್ತಿಗೆ ನೀಡಲಾಗಿದೆ ;

(ಆ) ಈ ಕಾರ್ಯಕ್ಕಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ;

(ಇ) ಗುತ್ತಿಗೆದಾರರೊಂದಿಗೆ ಕಾಮಗಾರಿ ಒಪ್ಪಂದ ಮಾಡಿಕೊಳ್ಳಲಾದ ದಿನಾಂಕ ಯಾವುದು ; ಗುತ್ತಿಗೆ ಕರಾರಿನನ್ವಯ ಕಾಮಗಾರಿಯನ್ನು ಯಾವ ದಿನಾಂಕಕ್ಕೆ ಮುಕ್ತಾಯಗೊಳಿಸಬೇಕಾಗಿದೆ ;

(ಈ) ಯು.ಜಿ.ಡಿ. ಕಾಮಗಾರಿ ನಿರ್ವಹಣೆಗೆ ರಸ್ತೆಯನ್ನು ಅಗೆದು ಕಾಮಗಾರಿ ಪೂರ್ಣಗೊಂಡ ನಂತರ ಪುನಃ ರಸ್ತೆ ನಿರ್ಮಿಸಲು ಸದರಿ ಗುತ್ತಿಗೆದಾರರಿಗೆ ಕರಾರಿನಲ್ಲಿ ತಿಳಿಸಲಾಗಿದೆಯೇ ; ಇದಕ್ಕಾಗಿ ಅನುದಾನದ ಕೊರತೆ ಏನಾದರೂ ಇದೆಯೇ ;

(ಉ) ಸುಂದರವಾದ ರಸ್ತೆಗಳು ಸದರಿ ಯು.ಜಿ.ಡಿ. ಕಾಮಗಾರಿಯಿಂದಾಗಿ ಹಾಳಾಗುತ್ತಿದ್ದರೂ ನಗರ ಸಭೆ ಯಾವುದೇ ಕ್ರಮ ಕೈಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಸದರಿ ರಸ್ತೆಗಳ ಪುನರ್ ನವೀಕರಣಕ್ಕಾಗಿ ಕೈಗೊಳ್ಳುವ ಕ್ರಮಗಳೇನು ?

## ಬಿರುಗಾಳಿಯಿಂದ ಹಾನಿಗೊಳಗಾಗಿರುವ ವಿದ್ಯುತ್ ಕಂಬಗಳು ಹಾಗೂ ಟ್ರಾನ್ಸ್ ಫಾರ್ಮರ್‌ಗಳು

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೩೦ (೫೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಬೀಸಿದ ಬಿರುಗಾಳಿಗೆ ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ವಿದ್ಯುತ್ ಕಂಬ ಹಾಗೂ ಟ್ರಾನ್ಸ್‌ಫಾರ್ಮರ್‌ಗಳಿಗೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಇಂತಹ ಹಾನಿಯಿಂದ ಎಷ್ಟು ಗ್ರಾಮ ಹಾಗೂ ನಗರಗಳಲ್ಲಿ ವಿದ್ಯುತ್ ಸಮಸ್ಯೆ ಎದುರಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು) ?

## ಹೈದರಾಬಾದ್ ಕರ್ನಾಟಕದ ಪ್ರದೇಶಕ್ಕೆ ವಿದ್ಯುತ್ ಪೂರೈಕೆ

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೩೧ (೫೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :--

(ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶಕ್ಕೆ ಪೂರೈಸಲು ಅಗತ್ಯವಿರುವ ವಿದ್ಯುತ್ ಪ್ರಮಾಣವೆಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ಈ ಪ್ರದೇಶಕ್ಕೆ ಕೊರತೆಯಾಗುವ ವಿದ್ಯುತ್ತನ್ನು ಸರಬರಾಜು ಮಾಡಲು ಸರಕಾರ ಏನು ಕ್ರಮ ಕೈಗೊಂಡಿದೆ ;

(ಇ) ಈ ಪ್ರದೇಶದಲ್ಲಿ ದಿನದಲ್ಲಿ ಎಷ್ಟು ಗಂಟೆಗಳ ಲೋಡ್ ಶೆಡ್ಡಿಂಗ್ ಮಾಡಲಾಗುತ್ತಿದೆ ?

## ತೆಂಗು ಬೆಳೆಗೆ ಪರಿಹಾರ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೩೨ (೫೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳಲ್ಲಿ ಬರಗಾಲದಿಂದ (ನೀರಿನ ಕೊರತೆಯಿಂದ) ಮತ್ತು ರೋಗ ಪೀಡಿತ (ಕಪ್ಪು ತಲೆ ಕಂಬಳಿ ಹುಳುವಿನ ಬಾಧೆ) ಕಾರಣದಿಂದ ನಾಶವಾಗಿರುವ ತೆಂಗಿನ ಮರಗಳ ಸಂಖ್ಯೆ ಎಷ್ಟು (ತೆಂಗಿನ ತೋಟಗಳ ವಿಸ್ತೀರ್ಣ, ತೆಂಗಿನ ಮರಗಳ ಸಂಖ್ಯೆ ವಿವರಗಳನ್ನು ತಾಲ್ಲೂಕುವಾರು ನೀಡುವುದು) ;

(ಆ) ಈ ಬಗ್ಗೆ ರೈತರಿಗೆ ತೋಟಗಾರಿಕೆ ಇಲಾಖೆಯಿಂದ ಯಾವ ರೀತಿ ಪರಿಹಾರ ನೀಡಲಾಗಿದೆ; ರೈತರ ಸಂಖ್ಯೆ, ಪರಿಹಾರದ ಮೊತ್ತದ ವಿವರವನ್ನು ತಾಲ್ಲೂಕುವಾರು ನೀಡುವುದು;

(ಇ) ಕಪ್ಪುತಲೆ ಹುಳದ ಬಾಧೆಯ ನಿವಾರಣೆಗೆ ಕೇಂದ್ರ ತೆಂಗು ಮಂಡಲಿಯು ಕೈಗೊಂಡಿರುವ ಕ್ರಮಗಳೇನು; ಈ ಎರಡೂ ಜಿಲ್ಲೆಗಳಲ್ಲಿ ಮಂಡಲಿಯು ವತಿಯಿಂದ ಕೈಗೊಂಡಿರುವ ಯೋಜನೆಗಳು ಮತ್ತು ಬಿಡುಗಡೆ ಮಾಡಿರುವ ಹಣ ಎಷ್ಟು (ವಿವರ ಒದಗಿಸುವುದು) ;

(ಈ) ಕೇಂದ್ರ ಸರ್ಕಾರಕ್ಕೆ ತೆಂಗು ಬೆಳೆ ಪರಿಹಾರಕ್ಕೆ ರಾಜ್ಯ ಸರ್ಕಾರ ಕಳುಹಿಸಿ ಕೊಟ್ಟಿರುವ ಪ್ಯಾಕೇಜ್‌ನ ವಿವರ ನೀಡುವುದು; ಈ

ಬಗ್ಗೆ ಕೇಂದ್ರದಿಂದ ಬಂದಿರುವ ಹಣಕಾಸಿನ ನೆರವು ಎಷ್ಟು; ರೈತರಿಗೆ ನೀಡಿರುವ ಪರಿಹಾರದ ಮೊತ್ತ ಎಷ್ಟು (ವಿವರ ಒದಗಿಸುವುದು) ?

## ತಂಬಾಕು ಬೆಳೆ ಪರವಾನಗಿ ನವೀಕರಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೩೩ (೬೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಜಿಲ್ಲೆಯಲ್ಲಿ ತಂಬಾಕು ಬೆಳೆಗಾರರ ಪರವಾನಗಿಯನ್ನು ನವೀಕರಣ ಮಾಡದೇ ರೈತರು ತೊಂದರೆಗೆ ಸಿಲುಕಿರುವುದು ಮತ್ತು ಆತ್ಮಹತ್ಯೆಗೆ ಶರಣಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಆ) ಒಂದೆಡೆ ತಂಬಾಕು ಬೆಳೆಯನ್ನು ನಿಷೇಧಿಸುತ್ತಿರುವುದು ಮತ್ತೊಂದು ಕಡೆ ತಂಬಾಕು ಬೆಳೆಯ ಪ್ರಮಾಣ ನಿಗದಿಪಡಿಸುತ್ತಿರುವುದರಿಂದ ರೈತರು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ತಂಬಾಕು ಬೆಳೆಗೆ ಪರ್ಯಾಯವಾಗಿ ಯಾವ ಬೆಳೆಯನ್ನು ಅಂದರೆ ತೋಟಗಾರಿಕೆ ಮತ್ತು ಅರಣ್ಯ ಕೃಷಿ( ಶ್ರೀಗಂಧ, ಹೆಬ್ಬೇವು, ಸಿಲ್ವರ್ ಇತ್ಯಾದಿ ಮರಗಳನ್ನು ಬೆಳೆಸುವುದು) ಮಾಡಲು ರೈತರಿಗೆ ಪ್ರೋತ್ಸಾಹ ನೀಡಲಾಗುತ್ತಿದೆಯೇ; (ವಿವರಗಳನ್ನು ಒದಗಿಸುವುದು) ಎಷ್ಟು ಎಕರೆ ಪ್ರದೇಶದಲ್ಲಿ ಯಾವ ಯಾವ ಪರ್ಯಾಯ ಬೆಳೆ ಪದ್ಧತಿ ಅನುಸರಿಸಲಾಗುತ್ತಿದೆ (ವಿವರ ಒದಗಿಸುವುದು) ?

## ಮಹಿಕೋ ಕಂಪನಿಯ ಕನಕಾ ಹತ್ತಿ ಬಿತ್ತಿದ ರೈತರು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನ ಸಭೆಯಿಂದ ಚುನಾಯಿತರಾದರು) :-**

೩೪ (೬೧) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ ಜಿಲ್ಲೆಯಲ್ಲಿ ಈಗಾಗಲೇ ಮಹಿಕೋ ಕಂಪನಿಯ ನಿಕ್ಕಾ ಪ್ಲಸ್ ಮತ್ತು ಕನಕಾ ಬಿಟಿ ಬೀಜ ಬಿತ್ತಿದ ರೈತರ ಸಂಖ್ಯೆ ಎಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಈ ರೈತರಿಗೆ ಪ್ರತಿ ಹೆಕ್ಟೇರಿಗೆ ಆರು ಸಾವಿರ ರೂಪಾಯಿ ಕೊಡುವ ವಿಚಾರ ಯಾವ ಹಂತದಲ್ಲಿದೆ; ಇಲ್ಲಿಯವರೆಗೂ ಏಕೆ ಕೊಟ್ಟಿಲ್ಲ; ಮತ್ತು ಯಾವಾಗ ಕೊಡಲಾಗುವುದು ?

## ಕೃಷಿ ಕಾಲೇಜು ಸ್ಥಾಪನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದರು) :-**

೩೫ (೬೩) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉಡುಪಿ ಜಿಲ್ಲೆಯ ಬ್ರಹ್ಮಾವರದಲ್ಲಿ ಕೃಷಿ ಕಾಲೇಜನ್ನು ಸ್ಥಾಪಿಸಲು ಸರ್ಕಾರ ಯೋಚಿಸಿದೆಯೇ ;

(ಆ) ಕಾಲೇಜನ್ನು ಸ್ಥಾಪಿಸುವ ಪ್ರಸ್ತಾಪವಿದ್ದರೆ, ಯಾವಾಗ ಪ್ರಾರಂಭಿಸಲಾಗುವುದು ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ವಿವರ ನೀಡುವುದು) ?

## ಸಹಕಾರಿ ಸಂಸ್ಥೆಯ ನೌಕರರಿಗೆ ನೀಡುವ ಸವಲತ್ತುಗಳಲ್ಲಿ ತಾರತ್ಯಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೩೬ (೬೫) ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸಹಕಾರಿ ಸಂಘಗಳ ಸಂಖ್ಯೆ ಎಷ್ಟು (ಸಂಸ್ಥೆವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಆ) ಸಹಕಾರಿ ಇಲಾಖೆಯ ಸಿಬ್ಬಂದಿಗಳಿಗೆ ಕೊಡುವ ಸವಲತ್ತುಗಳೇನು ;

(ಇ) ಸರಕಾರ ಮತ್ತು ಸಹಕಾರಿ ಸಂಸ್ಥೆಯ ನೌಕರರಿಗೆ ಸವಲತ್ತು ನೀಡುವಲ್ಲಿ ತಾರತಮ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ ನೌಕರರ ಕ್ಷೇಮಾಭಿವೃದ್ಧಿಗೋಸ್ಕರ ಸರಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು) ?

## ಶಿರಾಡಿ ಘಾಟ್ ರಸ್ತೆಯ ಕಾಮಗಾರಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೩೭ (೬೪) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಶಿರಾಡಿ ಘಾಟ್ ಚತುಷ್ಪಥ ರಸ್ತೆಗೆ ಮಂಜೂರಾದ ಒಟ್ಟು ಮೊತ್ತವೆಷ್ಟು ;

(ಆ) ಕಾಮಗಾರಿ ಗುತ್ತಿಗೆದಾರರ ಹೆಸರೇನು ;

(ಇ) ಎಷ್ಟು ಕಿ.ಮೀ. ಅಭಿವೃದ್ಧಿಪಡಿಸಲು ಟೆಂಡರ್ ಕರೆಯಲಾಗಿದೆ ;

(ಈ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಉ) ಯಾವಾಗ ಪೂರ್ಣಗೊಳಿಸಲಾಗುವುದು (ಪೂರ್ಣ ವಿವರ ನೀಡುವುದು) ?

## ಪುರಸಭೆ, ಪಟ್ಟಣ ಪಂಚಾಯ್ತಿಗಳಲ್ಲಿ ವಿವಿಧ ಯೋಜನೆಗಳು

**ಶ್ರೀ ಅರುಣ ಶಹಾಪುರ ( ಶಿಕ್ಷಕರ ಕ್ಷೇತ್ರ ) :-**

೩೮ (೬೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿಜಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪುರಸಭೆ ಮತ್ತು ಪಟ್ಟಣ ಪಂಚಾಯ್ತಿಗಳು ಕಳೆದ ೩ ವರ್ಷಗಳಲ್ಲಿ ಯಾವ ಯಾವ ಬಾಬತ್ತಿನ ಅಡಿ, ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿತ್ತು ;

(ಆ) ಅವುಗಳ ಸ್ಥಿತಿಗತಿ ಏನು ;

(ಇ) ಪ್ರತಿ ವರ್ಷದ ಅಭಿವೃದ್ಧಿ ಕಾಮಗಾರಿಗೆ ವಿನಿಯೋಗಿಸಿದ ಹಣ, ಕೈಗೊಂಡ ಕಾಮಗಾರಿ ಅವುಗಳ ಪ್ರಗತಿ ಯಾವ ಹಂತದಲ್ಲಿದೆ (ವಿವರ ನೀಡುವುದು) ;

(ಈ) ಸಿಂಧಗಿ ಪುರಸಭೆಯು ಕಳೆದ ೩ ವರ್ಷಗಳಿಂದ ಪ್ರತಿ ಬಾಬತ್ತಿನ ಅಡಿ ನಿರ್ವಹಿಸಿದ ಅಭಿವೃದ್ಧಿ ಕಾಮಗಾರಿಗಳ ವಿವರ, ಅವುಗಳ ಸ್ಥಿತಿಗತಿ, ನೀಡಿರುವ ಬಿಲ್‌ಗಳ ಮೊತ್ತವೆಷ್ಟು (ಸಂಪೂರ್ಣ ವಿವರ ನೀಡುವುದು) ?

## ಲೋಕೋಪಯೋಗಿ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ

**ಶ್ರೀ ಬಿ. ರಾಮಕೃಷ್ಣ ( ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :-**

೩೯ (೭೧) ಮಾನ್ಯ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ ಕಳೆದ ವರ್ಷ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಈ ಅನುದಾನದಲ್ಲಿ ಯಾವ ರಸ್ತೆಗಳನ್ನು ಅಭಿವೃದ್ಧಿ ಪಡಿಸಲಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು) ?

## ರೈತರ ಪಂಪ್‌ಸೆಟ್ಟುಗಳಿಗೆ ಉಚಿತವಾಗಿ ವಿದ್ಯುತ್ ಪೂರೈಕೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :-**

೪೦ (೬೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ರೈತರಿಗೆ ಉಚಿತವಾಗಿ ವಿದ್ಯುತ್ತನ್ನು ನೀಡಲಾಗುತ್ತಿದೆಯೇ ;

(ಆ) ನೀಡಲಾಗುತ್ತಿದ್ದರೆ ಉಚಿತವಾಗಿ ಎಷ್ಟು ಕೆ.ವಿ. ಪ್ರಮಾಣದಲ್ಲಿ ರೈತರಿಗೆ ನೀಡಲಾಗುತ್ತಿದೆ (ಪೂರ್ಣ ಮಾಹಿತಿ ನೀಡುವುದು) ?

## ಅಕ್ರಮ ಸಕ್ರಮ ಯೋಜನೆಯಡಿ ರೈತರಿಗೆ ಟ್ರಾನ್ಸ್‌ಫಾರ್ಮರ್‌ಗಳ ಪೂರೈಕೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :-**

೪೧ (೭೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಷ್ಟು ಜನ ರೈತರು ಅಕ್ರಮ ಸಕ್ರಮ ಯೋಜನೆಯಡಿಯಲ್ಲಿ ಹಣ ಪಾವತಿಸಿದ್ದಾರೆ ;

(ಆ) ಇವರುಗಳಿಗೆ ಎಷ್ಟು ಟಿ.ಸಿ. ಗಳನ್ನು ನೀಡಲಾಗಿದೆ ;

(ಇ) ಉಳಿದವರಿಗೆ ಟಿ.ಸಿ.ಯನ್ನು ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

## ನಿರಂತರ ಜ್ಯೋತಿ ಪೂರೈಕೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೪೨ (೯೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನಲ್ಲಿ "ನಿರಂತರ ಜ್ಯೋತಿ" ಯಾವಾಗ ಮಂಜೂರಾಯಿತು ; ಕೆಲಸ ಯಾವಾಗ ಪ್ರಾರಂಭವಾಯಿತು ;

(ಆ) ನಿಧಾನಗತಿಯಲ್ಲಿ ಕಾಮಗಾರಿ ನಡೆಯುತ್ತಿದ್ದು, ಕಾಮಗಾರಿ ಮುಗಿಸಲು ನೀಡಿರುವ ಸಮಯವೇನು ;

(ಇ) ತುರ್ತಾಗಿ ಮುಗಿಸಲು ಇರುವ ತೊಂದರೆಯೇನು ;

(ಈ) ಎಷ್ಟು ದಿನಗಳ ಕಾಲಮಿತಿಯಲ್ಲಿ ಮುಗಿಸಿ ಅನುಕೂಲ ಮಾಡಿಕೊಡಲಾಗುವುದು ?

## ಜಲಾನಯನ ಯೋಜನೆಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೪೩ (೯೨) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೧೧-೧೨ನೇ ಸಾಲಿನಿಂದ ಅಸ್ತಿತ್ವದಲ್ಲಿರುವ ಜಲಾನಯನ ಯೋಜನೆಗಳು ಯಾವುವು ; ವಿವಿಧ ಜಲಾನಯನ ಯೋಜನೆಗಳಡಿ ರಾಜ್ಯದ ಎಲ್ಲಾ ಜಿಲ್ಲೆಗಳ ಪ್ರತಿ ತಾಲ್ಲೂಕುಗಳಲ್ಲಿ ವಲಯವಾರು, ಯೋಜನಾವಾರು ಕೈಗೊಂಡಿರುವ ಕಾಮಗಾರಿಗಳ ವಿವರ, ಈ ಕಾಮಗಾರಿ ಯೋಜನಾ ಮೊತ್ತ, ಇಲ್ಲಿಯವರೆಗೂ ಖರ್ಚಾಗಿರುವ ಮೊತ್ತದ ವರ್ಷವಾರು ವಿವರ ನೀಡುವುದು ;

(ಆ) ಈ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಮತ್ತು ನ್ಯೂನತೆಗಳ ನಿವಾರಣೆಗೆ ಹಾಗೂ ಭ್ರಷ್ಟಾಚಾರದ ಪ್ರಕರಣಗಳಿದ್ದರೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಆಶ್ರಯ ನಿವೇಶನಕ್ಕಾಗಿ ಜಮೀನು ಭೂಸ್ವಾಧೀನ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೪೪ (೯೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಾಗಲಕೋಟೆ ಜಿಲ್ಲೆ ಹುನಗುಂದ ತಾಲ್ಲೂಕು ಇಳಕಲ್ ನಗರ ಸಭೆ ವ್ಯಾಪ್ತಿಯಲ್ಲಿನ ನಿವೇಶನ ರಹಿತರಿಗಾಗಿ ಆಶ್ರಯ ನಿವೇಶನ

ಒದಗಿಸಲು ಬಾಗಲಕೋಟೆ ಜಿಲ್ಲಾಧಿಕಾರಿಯವರು, ಇಳಕಲ್ ಹೊರ ವಲಯದ ಕಂದಗಲ್ ರಸ್ತೆಯಲ್ಲಿನ ೭೬ ಎಕರೆ ಜಮೀನನ್ನು ಗುರುತಿಸಿ ಅದರ ಭೂಸ್ವಾಧೀನಕ್ಕಾಗಿ ೨೦೧೩ರ ಆರಂಭದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಪ್ರಸ್ತಾವನೆಯನ್ನು ರಾಜೀವ್ ಗಾಂಧಿ ವಸತಿ ನಿಗಮ ಇದುವರೆಗೆ ಅಂಗೀಕರಿಸದಿರಲು ಕಾರಣಗಳೇನು ; ಬಡವರ ನಿವೇಶನಗಳಿಗೆ ಸಂಬಂಧಿಸಿದ ಮಹತ್ವಾಕಾಂಕ್ಷಿಯಾದ ಈ ಪ್ರಸ್ತಾವನೆಯನ್ನು ಸರ್ಕಾರ ಯಾವಾಗ ಅಂಗೀಕರಿಸಿ ಬಡ ಜನರಿಗೆ ನಿವೇಶನ ಒದಗಿಸುವ ಕ್ರಮ ಕೈಗೊಳ್ಳುತ್ತದೆ ?

## ಕೃಷಿ ಇಲಾಖೆಯಲ್ಲಿ ರೇಷ್ಮೆ ಇಲಾಖೆಯ ವಿಲೀನ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೪೫ (೯೦) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೃಷಿ ಇಲಾಖೆಯಲ್ಲಿ ರೇಷ್ಮೆ ಇಲಾಖೆಯನ್ನು ಯಾವಾಗ ವಿಲೀನ ಮಾಡಲಾಯಿತು ;

(ಆ) ಹಾಗಿದ್ದಲ್ಲಿ, ರೇಷ್ಮೆ ಇಲಾಖೆ ವಿಲೀನದಿಂದ ಈ ಇಲಾಖೆಗೆ ಅಥವಾ ಬೆಳೆಗಾರರಿಗೆ ಆಗುವ ಪ್ರಯೋಜನಗಳೇನು ;

(ಇ) ಯಾವ ಮಾನದಂಡದ ಮೂಲಕ ವಿಲೀನ ಪ್ರಕ್ರಿಯೆ ಮಾಡಲಾಯಿತು ;

(ಈ) ವಿಲೀನ ಕುರಿತಂತೆ ರೇಷ್ಮೆ ಬೆಳೆಗಾರರು ಅಥವಾ ಉದ್ದಿಮೆದಾರರ ಪ್ರತಿಕ್ರಿಯೆ ಏನು ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 03342/1000 ಪ್ರತಿಗಳು/19–06–2014